KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-108
ಮಂಗಳವಾರ 25 ಫೆಬ್ರವರಿ 2025
Price: 2.00 Rs. Pages-2

RNI: KARKAN/2023/88508

ಕರ್ನಾಟಕ ಸಕ್ಸೆಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

ತುಮಕೂರು ನಗರದ ಮಾರುತಿನಗರ ನಾಗರಿಕ ಹಿತರಕ್ಷಣಾ ಸಮಿತಿ ಇವರಿಂದ 3ನೇ ಕ್ರಾಸ್‌ನಲ್ಲಿರುವ ಸಂಜೀವಿನಿ ಪಾರ್ಕ್‌ನಲ್ಲಿ ಬಾಂದವ್ಯ ಮಹಿಳಾ ಸಮಾಜ ಇವರ ಸಂಯುಕ್ತಾಶ್ರಯದಲ್ಲಿ ಅಶ್ವತ್ಥಕಟ್ಟೆ ವಿವಾಹ ಕಲ್ಯಾಣೋತ್ಸವ, ಮಹಿಳೆಯರಿಗೆ ಬಾಗಿನ ಅರ್ಪಣೆ, ಉಚಿತ ಆರೋಗ್ಯ ತಪಾಸಣೆ ಕಾರ್ಯಕ್ರಮ ನಡೆದವು.

ಪ್ರಧಾನಿಯವರಿಂದ ಪಿ.ಎಂ. ಕಿಸಾನ್ ಯೋಜನೆಯ ಹಣ ಬಿಡುಗಡೆ

ತುಮಕೂರು: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ 19ನೇ ಕಂತನ್ನು ಬಿಹಾರದ ಭಗಲ್‌ಪುರದಲ್ಲಿ ಸೋಮವಾರ ಬಿಡುಗಡೆ ಮಾಡಿದರು. ಕೇಂದ್ರರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಕಾರ್ಯಕ್ರಮವನ್ನು ಆನ್‌ಲೈನ್ ಮೂಲಕ ವೀಕ್ಷಣೆ ಮಾಡಿದ ನಂತರ ಜಿಲ್ಲೆಯ ತಿಪಟೂರಿನ ಗುರುಕುಲಾನಂದಾಶ್ರಮ ಕಲ್ಯಾಣ ಮಂಟಪದಲ್ಲಿ ಮಾತನಾಡುತ್ತಾ, ದೇಶದ 9.80 ಕೋಟಿ ರೈತರಿಗೆ (2.41 ಕೋಟಿ ಮಹಿಳಾ ರೈತರು ಸೇರಿದಂತೆ) ಒಟ್ಟು 22,000 ಕೋಟಿ ರೂ.ಗಳನ್ನು ಈ ಕಂತಿನ ಹಣವಾಗಿ ನೇರ ನಗದು ವರ್ಗಾವಣೆ(ಡಿಬಿಟಿ) ಮೂಲಕ ಬಿಡುಗಡೆಗೊಳಿಸಲಾಗಿದೆ. ಇದರಲ್ಲಿ ರಾಜ್ಯದ 44.2 ಲಕ್ಷ ಫಲಾನುಭವಿಗಳಿಗೆ 884 ಕೋಟಿ ರೂ. ಒಳಗೊಂಡಿದೆ. ಈ ಯೋಜನೆ ಕೇವಲ ರೈತರನ್ನಷ್ಟೇ ಪ್ರೋತ್ಸಾಹಿಸದೆ ದೇಶದ ಗ್ರಾಮೀಣಾಭಿವೃದ್ಧಿ ಹಾಗೂ ಕೃಷಿ ಸಮೃದ್ಧಿಗಾಗಿ ನಾಂದಿ ಹಾಕಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಿಪಟೂರು ಪುರಸಭೆ ಅಧ್ಯಕ್ಷೆ ಯಮುನಾ ಧರಣೇಶ್, ತಿಪಟೂರು ತಾಲ್ಲೂಕು ತಹಶೀಲ್ದಾರ್ ಪವನ್ ಕುಮಾರ್, ಸೇರಿದಂತೆ ಮತ್ತಿತರರು ಹಾಜರಿದ್ದರು.

ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿ : ಸಚಿವ ಡಾ: ಜಿ. ಪರಮೇಶ್ವರ

ತುಮಕೂರು: ಸರ್ಕಾರದ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ, ಶಕ್ತಿ, ಯುವನಿಧಿ, ಗೃಹಜ್ಯೋತಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಅಧಿಕಾರಿಗಳು ವಿಳಂಬ ಧೋರಣೆ ತೋರಬಾರದು ಎಂದು ಗೃಹ ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ತಿಳಿಸಿದರು.

ಅವರು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ 2024-25ನೇ ಸಾಲಿನ 3ನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಈ ಯೋಜನೆಗಳ ಕುರಿತು ಮಾಹಿತಿ ನೀಡುತ್ತಾ, ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯಲ್ಲಿ ಆಗಸ್ಟ್ 2023ರಿಂದ ಅಕ್ಟೋಬರ್ 2024ರವರೆಗೆ 90,38,371 ಫಲಾನುಭವಿಗಳಿಗೆ ಒಟ್ಟು 1807.67 ಕೋಟಿ ರೂ. ಪಾವತಿಸಲಾಗಿದೆ. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 2023

ಜೂನ್‌ನಿಂದ ಜನವರಿ 2025ರವರೆಗೆ 1164.14 ಲಕ್ಷ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದು, ಇದರ ಒಟ್ಟು ಆದಾಯ 34184.97 ಲಕ್ಷ ರೂ.ಗಳಾಗಿದೆ. ಯುವನಿಧಿ ಯೋಜನೆಯಲ್ಲಿ ಜನವರಿ 2025 ಅಂತ್ಯಕ್ಕೆ 7743 ಯುವಜನರು ನೋಂದಣಿಯಾಗಿದ್ದು, 5425 ಜನರಿಗೆ ಡಿಬಿಟಿ ಮೂಲಕ 7,60,83,000 ರೂ. ಪಾವತಿಸಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಜುಲೈ 2023 ರಿಂದ ಸೆಪ್ಟೆಂಬರ್ 2024ರವರೆಗೆ 6,08,446 ಪಡಿತರ ಚೀಟಿಗಳಿಗೆ ಒಟ್ಟು 509,43,46,990 ರೂ. ನೇರ ನಗದು ವರ್ಗಾವಣೆ ಮಾಡಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ಆಗಸ್ಟ್ 2023 ರಿಂದ ನವೆಂಬರ್ 2024 ರವರೆಗೆ 802093 ಫಲಾನುಭವಿ ಗೃಹ ಬಳಕೆ ಸ್ಥಾವರಗಳಿಗೆ 343.13 ಕೋಟಿ ಬಿಡುಗಡೆಯಾಗಿದೆ ಎಂದು ತಿಳಿಸಿದರು.

ನಂತರ ಗೃಹ ಸಚಿವರು ಮಾತನಾಡಿ, ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ತಮ್ಮ ಸವಲತ್ತುಗಳನ್ನು ಅಧಿಕಾರಿಗಳು ವಿಳಂಬ ಮಾಡದೆ ಪಾವತಿ ಮಾಡಬೇಕೆಂದರು. ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ಬ್ಯಾಚ್-1 ರಿಂದ 4ರವರೆಗೂ ಒಟ್ಟು 3699 ಕಾಮಗಾರಿಗಳಿದ್ದು, ಇವುಗಳಿಗೆ 2976 ಕಾಮಗಾರಿಗಳಿಗೆ ಕಾರ್ಯಾದೇಶ ನೀಡಲಾಗಿದ್ದು, 800 ಕಾಮಗಾರಿ ಪೂರ್ಣಗೊಂಡಿದ್ದು, 1555 ಕಾಮಗಾರಿಗಳು ಪ್ರಗತಿ ಹಂತದಲ್ಲಿವೆ. ಬಾಕಿ ಇರುವ ಕಾಮಗಾರಿಗಳನ್ನು ಒಂದೆರಡು ತಿಂಗಳಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲೆಯಲ್ಲಿ ಕುಡಿಯುವ ನೀರು, ವಿದ್ಯುಚ್ಛಕ್ತಿ, ಬೆಳೆ ವಿಮೆ, ಇವುಗಳನ್ನು ಆದ್ಯತೆ ಮೇರೆಗೆ ಜನರಿಗೆ ನೀಡಬೇಕೆಂದು ತಾಕೀತು ಮಾಡಿದರು.

ಆರೋಗ್ಯ ಸೇವೆ ನೀಡುವಲ್ಲಿ ಸಹ ಜಿಲ್ಲೆ ಪ್ರಗತಿ ಸಾಧಿಸಿ ಗರ್ಭಿಣಿ, ಬಾಣಂತಿಯರ ಸವಲತ್ತುಗಳನ್ನು ಕಾಲಕಾಲಕ್ಕೆ ನೀಡಬೇಕೆಂದರು.

ಸಭೆಯಲ್ಲಿ ಸಹಕಾರ ಸಚಿವರಾದ ಕೆ.ಎನ್.ರಾಜಣ್ಣ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ.ರೇವಣ್ಣ, ತುರುವೇಕೆರೆ ಶಾಸಕರಾದ ಎಂ.ಟಿ.ಕೃಷ್ಣಪ್ಪ, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿ.ಪಂ. ಸಿಇಓ ಜಿ.ಪ್ರಭು ಹಾಗೂ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

ನೊಣವಿನಕೆರೆಯ ಕಾಡಸಿದ್ದೇಶ್ವರ ಮಠದ ಅಜ್ಜಯ್ಯನ ಜಾತ್ರಾ ಮಹೋತ್ಸವ

ತಿಪಟೂರು: ತಾಲ್ಲೂಕಿನ ನೊಣವಿನಕೆರೆಯ ಕಾಡಸಿದ್ದೇಶ್ವರ ಮಠದ ಮೂರು ದಿನಗಳ ಕಾಲ ನಡೆದ ಅಜ್ಜಯ್ಯನ ಜಾತ್ರಾ ಮಹೋತ್ಸವದಲ್ಲಿ ಕರಿಬಸವ ಸ್ವಾಮಿಗಳ 232 ನೇ ವಾರ್ಷಿಕ ಸ್ಮರಣೋತ್ಸವ ಹಾಗೂ ಕರಿಬಸವದೇಶಿಕೇಂದ್ರ ಮಹಾಸ್ವಾಮಿಗಳವರ 17 ನೇ ವರ್ಷದ ಪುಣ್ಯಾರಾಧನೆ, ಮುತ್ತೈದೆಯರಿಗೆ ಬಾಗಿನ ಸೇವೆ, ಚಿಣ್ಣರ ಸಂತೆ, ಕಾಡಸಿದ್ದೇಶ್ವರ ಸ್ವಾಮಿಯ ಅಡ್ಡಪಲ್ಲಕ್ಕಿ ಉತ್ಸವ, ಕಾಡಸಿದ್ದೇಶ್ವರ ಸ್ವಾಮಿಯ ರಥೋತ್ಸವ, ಉಚಿತ ಆರೋಗ್ಯ ತಪಾಸಣೆ, ರಕ್ತದಾನ ಶಿಬಿರ, 101 ಮಕ್ಕಳ ವಿದ್ಯಾಯಜ್ಞ ಸಂಕಲ್ಪ ಕಾರ್ಯಕ್ರಮ, ಲಿಂಗದೀಕ್ಷೆ, ಕಾರ್ಯಕ್ರಮ, ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿ, ಕಬ್ಬಡ್ಡಿ ಪಂದ್ಯಾವಳಿಗಳನ್ನು ಆಯೋಜನೆ ಮಾಡಿ ಜಾತ್ರಾ ಕೈಂಕರ್ಯ ಕಾರ್ಯಕ್ರಮಗಳು ನಡೆದವು.

ಕಾಡಸಿದ್ದೇಶ್ವರ ಮಠದ ಅಜ್ಜಯ್ಯನ ಜಾತ್ರಾ ಮಹೋತ್ಸವದ ಭಾನುವಾರ ಏರ್ಪಡಿಸಿದ್ದ ಧರ್ಮಸಭೆಯನ್ನು ಉದ್ಘಾಟಿಸಿ ಮಾತನಾಡಿದ ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ನಾವು ಎಷ್ಟು ಆಸ್ತಿ ಮಾಡುತ್ತಿದ್ದೇವೆ ಎಂದು ಲೆಕ್ಕ ಹಾಕುತ್ತಿದ್ದರೆ ದೇವರು ನಮ್ಮ ಆಯಸ್ಸು ಎಷ್ಟು

ಕಡಿಮೆಯಾಯಿತು ಎಂದು ಲೆಕ್ಕ ಹಾಕುತ್ತಿರುತ್ತಾನೆ ಯಾವಾಗಲೂ ಭಗವಂತ ಕೆಟ್ಟವರಿಗೆ ಅನುಗ್ರಹಿಸುವುದಿಲ್ಲ. ಆದ್ದರಿಂದ ನಾವು ಯಾವಾಗಲೂ ಒಳ್ಳೆಯದನ್ನೇ ಮಾಡಬೇಕು. ನಂಬಿದ ದೇವರು ನಮಗೆ ಯಾವುದೇ ರೂಪದಲ್ಲಿಯಾದರೂ ಸಹಾಯ ಮಾಡುತ್ತಾನೆ ಎಂದು ತಿಳಿಸಿದರು.

ನಾವು ಇಲ್ಲಿಗೆ ಸಂಸದರಾಗಿ ಶಾಸಕರಾಗಿ ಬಂದಿಲ್ಲ. ಮಠದ ಭಕ್ತರಾಗಿ ಬಂದಿದ್ದೇವೆ. ಗುರುಗಳ ಹಾಗೂ ದೇವರ ಅನುಗ್ರಹದಿಂದ ನಾವು ಸಾಧನೆ ಮಾಡಿದ್ದೇವೆ ಅಷ್ಟೆ. ಉಪಮುಖ್ಯಮಂತ್ರಿಯಾಗಿರುವ ಡಿ.ಕೆ.ಶಿವಕುಮಾರ್ ಮೂಲಕ ನನಗೆ ಮಠದ ಪರಿಚಯವಾಯಿತು. ಮಠದ ಭಕ್ತನಾಗಿ ಸಂಪೂರ್ಣವಾಗಿ ಅಜ್ಜೇಯನಿಗೆ ಶರಣಾದ ಮೇಲೆಯೇ ನನಗೆ ಒಳ್ಳೆಯದಾಗಿದೆ. ಎರಡು ಬಾರಿ ರಾಜ್ಯಸಭಾ ಸದಸ್ಯನಾಗಿ ಆಯ್ಕೆಯಾದೆ. ಎಂತಹ ಕ್ಲಿಷ್ಟಕರ ಸನ್ನಿವೇಶದಲ್ಲಿಯೂ ನನಗೆ ಒಳ್ಳೆಯದೇ ಆಯಿತು ಎಂದರು.

ಶಾಸಕ ಕೆ.ಷಡಕ್ಷರಿ ಮಾತನಾಡಿ ಶ್ರೀಕ್ಷೇತ್ರ ಇಷ್ಟು ವಿಶಾಲವಾಗಿ ಬೆಳೆಯುತ್ತದೆ ಎಂದು ಎಣಿಸಿರಲಿಲ್ಲ. ಅಜ್ಜಯ್ಯನ ಶಕ್ತಿ ಅಪಾರ. ನನಗೆ ಅದನ್ನು ಅರ್ಥ ಮಾಡಿಕೊಳ್ಳಲು ಸಮಯ ಬೇಕಾಯಿತು. ನಾನು ಸಹಕಾರ ಕ್ಷೇತ್ರದಲ್ಲಿ ಬೆಳೆದು ಬಂದಿದ್ದರಿಂದ ಕಾಯಕಶಕ್ತಿಯಲ್ಲಿ ನಂಬಿಕೆ ಇಟ್ಟುಕೊಂಡಿದ್ದೇನೆ. ಈ ಬಾರಿ ನನ್ನ ಕ್ಷೇತ್ರಕ್ಕೆ ಜಿಲ್ಲೆಯಾಗಲು ಬೇಕಾಗಿರುವ ಎಲ್ಲ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು ನನ್ನ ಸಂಕಲ್ಪ ಹಾಗೂ ಗುರಿಯಾಗಿದೆ. ಜೊತೆಗೆ ಇಡೀ ತಾಲೂಕಿನ ಪ್ರತಿ ಮನೆಗೂ ಕುಡಿಯುವ ನೀರನ್ನು ಕೊಡುವ ಯೋಜನೆ ಮಾಡಿದ್ದೇನೆ ಎಂದರು.

ಕಾಡಸಿದ್ದೇಶ್ವರ ಮಠದ ಕಿರಿಯ ಶ್ರೀಗಳಾದ ಅಭಿನವ ಕಾಡಸಿದ್ದೇಶ್ವರಸ್ವಾಮಿಗಳು ಮಾತನಾಡಿ ಮಠಕ್ಕೆ 800 ವರ್ಷಗಳ ಇತಿಹಾಸವಿದೆ. ಆಗಿನಿಂದ ಈವರೆಗೆ 19ಪೂಜ್ಯರ ತಪಸ್ಸಿನ ಫಲ ಹಾಗೂ ಈಗಿನ ಶ್ರೀಗಳ ಮಾರ್ಗದರ್ಶನದಿಂದ ನಮ್ಮ ಮಠ ಬೆಳೆದಿದೆ. ಶ್ರೀಮಠವು ಅನ್ನ-ಅರಿವು-ಅಭಯದಾನ ಆರೋಗ್ಯದ ಸತ್‌ಸಂಕಲ್ಪ ಹಾಗೂ ಶ್ರೀಗಳ ಆಶೀರ್ವಾದದ ಬಲದಿಂದ ನಡೆಯುತ್ತಿದ್ದು ಎಲ್ಲ ಜಾತಿ, ಧರ್ಮದವರೂ ಇಲ್ಲಿ ಬಂದು ಸೇವೆ ಸಲ್ಲಿಸಿ ಆಶೀರ್ವಾದ ಪಡೆದುಕೊಳ್ಳುತ್ತಾರೆ ಎಂದರು.

ಮಹಾರಾಷ್ಟ್ರದ ಪಾನಮಂಗಳೂರು ಮಠದ ಶಿವಯೋಗಿ ಶಿವಾಚಾರ್ಯ ಸ್ವಾಮಿಗಳು, ಬೆಂಗಳೂರಿನ ವಿಭೂತಿಪುರ ಮಠದ ಮಹಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿದರು.

ಕಾರ್ಯಕ್ರಮವು ಮಠದ ಪೀಠಾಧ್ಯಕ್ಷರಾದ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ನೇರವೇರಿತು. ತೆವಡಿಹಳ್ಳಿ ಮಠದ ಗೋಸಲ ಚನ್ನಬಸವೇಶ್ವರ ಶಿವಾಚಾರ್ಯ ಸ್ವಾಮೀಜಿ, ಅರಸೀಕೆರೆ ತಾ ಬೂದಿಹಾಳ್ ಮಠದ ಶಶಿಶೇಖರ ಸಿದ್ದಬಸವ ಮಹಾಸ್ವಾಮಿ, ಶ್ರೀ ಅಭಿನವ ಕಾಡಸಿದ್ದೇಶ್ವರ ಸ್ವಾಮಿಗಳು, ಷಡಾಕ್ಷರಿಹಿತೇಶ್ವರ ಶಿವಾಚಾರ್ಯ ಸ್ವಾಮಿಜಿ, ಗುರುಮೂರ್ತಿ ಶಿವಾಚಾರ್ಯ ಸ್ವಾಮಿಗಳು, ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಕೊಳ್ಳೆಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ, ತುರುವೇಕೆರೆ ಶಾಖಾಮಠದ ಗುರುಚನ್ನಬಸವಯ್ಯ, ಡಾ.ಹಿರೇಮಠ್, ವಿಶ್ವ ಕಲ್ಯಾಣ ಟ್ರಸ್ಟ್‌ನ ಜಯಣ್ಣ, ಶಂಭುಗೌಡರು, ಶ್ರೀಮಠದ ಮೇನೇಜರ್ ಶಂಭು, ಉಮೇಶಣ್ಣ, ಲೋಕೇಶ್ ಸೇರಿದಂತೆ ಹಲವಾರು ಸ್ವಾಮೀಜಿ, ರಾಜಕಾರಣಿಗಳು ಅಧಿಕಾರಿಗಳು ಭೇಟಿ ನೀಡಿದರು.

ರಾಗಿ ಖರೀದಿಗೆ ಇನ್ನೆಷ್ಟು ದಿನ ರೈತರು ಕಾಯಬೇಕು?; ಹೊಸಹಳ್ಳಿ ಚಂದ್ರಣ್ಣ ಪ್ರಶ್ನೆ

ಹುಳಿಯಾರು: ಸಂಕ್ರಾಂತಿ ಹಬ್ಬಕ್ಕಾದರೂ ರಾಗಿ ಖರೀಧಿಸಿ ಸರ್ಕಾರ ಹಣ ಕೊಡುತ್ತದೆಂದು ರೈತರು ಭಾವಿಸಿದ್ದರು. ಸಂಕ್ರಾಂತಿ ಕಳೆದು ಶಿವರಾತ್ರಿ ಬಂದಿದ್ದರೂ ಖರೀದಿಯ ಬಗ್ಗೆ ಸರ್ಕಾರದಿಂದ ಸ್ಪಷ್ಟ ಮಾಹಿತಿಯಿಲ್ಲ. ರಾಗಿ ಖರೀದಿಗೆ ಇನ್ನೆಷ್ಟು ದಿನ ರೈತರು ಕಾಯಬೇಕು ಎಂದು ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಪ್ರಶ್ನಿಸಿದರು.

ಹೊಸಹಳ್ಳಿ ಚಂದ್ರಣ್ಣ ಬಣದ ರಾಜ್ಯ ರೈತ ಸಂಘದಿಂದ ಸೋಮವಾರ ಹುಳಿಯಾರಿನ ಎಪಿಎಂಸಿ ಮೂಲಕ ರಾಜ್ಯ ಸರ್ಕಾರಕ್ಕೆ ರಾಗಿ ಖರೀದಿ ಆರಂಭಿಸಲು ಒತ್ತಾಯಿಸಿ ಮನವಿ ಪತ್ರ ಸಲ್ಲಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಿತ್ತನೆ ಬೀಜ, ಗೊಬ್ಬರ, ಉಳುಮೆ, ಕಟಾವು ಹೀಗೆ ರಾಗಿ ಬೆಳೆಯಲು ರೈತ ಸಾವಿರಾರು ರೂ. ವೆಚ್ಚ ಮಾಡಿದ್ದಾನೆ. ಕಳೆದ ವರ್ಷ ಮಳೆ ಇಲ್ಲದೆ ಬೆಳೆ ಕೈ ಕೊಟ್ಟಿದ್ದರಿಂದ ಈ ವರ್ಷ ಸಾಲಸೂಲ

ಮಾಡಿ ರಾಗಿ ಬೆಳೆದಿದ್ದಾರೆ. ಜ.1 ರಂದು ನಫೆಡ್‌ಗೆ ರಾಗಿ ಬಿಟ್ಟರೆ ಸಂಕ್ರಾಂತಿ ಹಬ್ಬಕ್ಕಾದರೂ ಬ್ಯಾಂಕ್ ಖಾತೆಗೆ ಸರ್ಕಾರ ಹಣ ಹಾಕುತ್ತದೆ ಎಂದು ನಿರೀಕ್ಷಿಸಿದ್ದ. ಆದರೆ ಶಿವರಾತ್ರಿ ಹಬ್ಬ ಬಂದರೂ ರಾಗಿ ಖರೀಧಿಸಲು ಸರ್ಕಾರ ಇನ್ನು ಮೀನಾಮೇಷ ನೋಡುತ್ತಿದೆ. ಈಗ ಸಾಲುಸಾಲು ಹಬ್ಬ, ಜಾತ್ರೆ, ಮದುವೆಗಳಿಗೆ ರೈತ ಪುನಃ ಸಾಲ ಮಾಡಬೇಕಾದ ಅನಿವಾರ್ಯತೆಯನ್ನು ಸರ್ಕಾರ ಸೃಷ್ಟಿಸಿದೆ ಎಂದು ಆರೋಪಿಸಿದರು.

ರೈತ ಸಂಘದ ತಾಲೂಕು ಕಾರ್ಯಾಧ್ಯಕ್ಷ ಕರಿಯಪ್ಪ, ಹುಳಿಯಾರು ಹೋಬಳಿ ಅಧ್ಯಕ್ಷ ಹೂವಿನ ತಿಮ್ಮಯ್ಯ, ಭೈರಾಪುರ ಕುಮಾರಸ್ವಾಮಿ, ನರುವಗಲ್ಲು ಲಕ್ಕಮ್ಮ, ನಂದಿಹಳ್ಳಿ ರೇವಣ್ಣ, ಸೋಮಜ್ಜನ ಪಾಳ್ಯ ಪುಟ್ಟಯ್ಯ, ತಮ್ಮಡಿಹಳ್ಳಿ ಗೊಲ್ಲರಹಟ್ಟಿ ನಿಂಗಪ್ಪ, ಹುಳಿಯಾರು ಹನುಮಂತರಾಜು, ಸೀಗೇಬಾಗಿ ಜಗ್ಗಣ್ಣ, ಗಂಗಣ್ಣ, ಕುಮಾರಸ್ವಾಮಿ, ಮಂಜುನಾಥ್, ಆಶಾ, ಮಂಜಮ್ಮ, ವಾಣಿಶ್ರೀ, ರೇಷ್ಮಾ, ಚಂದ್ರಶೇಖರ ರಾವ್, ಪುಟ್ಟಿಬಾಯಿ ಮತ್ತಿತರರು ಇದ್ದರು.

ಹುಳಿಯಾರು ಎಪಿಎಂಸಿ ಬಳಿ ರಾಗಿ ಖರೀದಿ ಆರಂಭಿಸುವಂತೆ ಮನವಿ ಸಲ್ಲಿಸುವ ವೇಳೆಯಲ್ಲಿ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಖುದ್ದು ಜಿಲ್ಲಾಧಿಕಾರಿ ಶುಭಕಲ್ಯಾಣ್ ಅವರಿಗೆ ರಾಗಿ ಖರೀದಿ ವಿಳಂಭವಾಗುತ್ತಿರುವುದರಿಂದ ಆಗುತ್ತಿರುವ ತೊಂದರೆಯನ್ನು ವಿವರಿಸಿದರು. ಇದಕ್ಕೆ ಪ್ರತಿಯಾಗಿ ಜಿಲ್ಲಾಧಿಕಾರಿಗಳು ಖಾಲಿ ಚೀಲದ ಸಮಸ್ಯೆಯಿತ್ತು. ಈಗ ಖಾಲಿ ಚೀಲಗಳೂ ಸಹ ಬಂದಿದ್ದು ಖರೀದಿ ಪ್ರಕ್ರಿಯೆ ಆರಂಭಿಸಲು ಯಾವುದೇ ತೊಡಕಿಲ್ಲ. ಹಾಗಾಗಿ ತಕ್ಷಣ ಸರ್ಕಾರದ ಗಮನಕ್ಕೆ ತಂದು ಅನುಮತಿ ಪಡೆದು ಶೀಘ್ರದಲ್ಲೇ ಖರೀದಿ ಪ್ರಕ್ರಿಯೆ ಆರಂಭಿಸುವುದಾಗಿ ಭರವಸೆ ನೀಡಿದರು.

ಹೈಕಮಾಂಡ್ ಪರಿಗಣಿಸಿದ್ರೆ ರಾಜ್ಯಾಧ್ಯಕ್ಷ ಆಗೋಕೆ ಸಿದ್ಧ

ಬೆಂಗಳೂರು: ಹೈಕಮಾಂಡ್ ನನ್ನನ್ನು ಪರಿಗಣಿಸಿದ್ರೆ ರಾಜ್ಯಾಧ್ಯಕ್ಷ ಆಗೋಕೆ ನಾನು ಸಿದ್ಧ ಎಂದು ಯತ್ನಾಳ್ ಟೀಂನ ಮಾಜಿ ಸಚಿವ ಕುಮಾರ್ ಬಂಗಾರಪ್ಪ ರಾಜ್ಯಾಧ್ಯಕ್ಷ ಸ್ಥಾನದ ಆಸೆ ಹೊರಹಾಕಿದ್ದಾರೆ.

ಬೆಂಗಳೂರಿನಲ್ಲಿ ಅವರು ಸುದ್ದಿಗಾರರೊಂದಿಗೆ ಮಾತಾಡಿದರು. ಈ ವೇಳೆ, ಬಂಗಾರಪ್ಪ ಮಗ ಆಗಿದ್ದಕ್ಕೆ ನನಗೆ ಅಧ್ಯಕ್ಷ ಸ್ಥಾನ ಕೊಡ್ತಾರೆ ಅಂದರೆ ಯಡಿಯೂರಪ್ಪ ಮಗ ಅಂತ ವಿಜಯೇಂದ್ರಗೆ ಕೊಟ್ಟ ಹಾಗೇ ಆಗುತ್ತದೆ. ದೊಡ್ಡವರ ಮಕ್ಕಳಾಗಿ ಹುಟ್ಟಿದ ಮಾತ್ರಕ್ಕೆ ನಾವು ದೊಡ್ಡವರಾಗಲ್ಲ. ಕಲಿಬೇಕು, ಸಂಯಮ ಬೇಕು, ಜನ ಸಾಮಾನ್ಯರ ಜೊತೆ ಇರಬೇಕು. ಎಲ್ಲರ ಅಭಿಪ್ರಾಯ ಕೇಳುವ ತಾಳ್ಮೆ ಇರಬೇಕು. ಆದರೆ ಈಗ ಅದು ಆಗಿಲ್ಲ ಅನ್ನೋದು ನಮ್ಮ ವಾದ ಎಂದು ವಿಜಯೇಂದ್ರ ವಿರುದ್ಧ ಕಿಡಿಕಾರಿದ್ದಾರೆ.

ರಾಜ್ಯದಲ್ಲಿ ಮುಂದಿನ 5 ದಿನ ತಾಪಮಾನ ಹೆಚ್ಚಳ ನಡುವೆ ಮಳೆ ಮುನ್ಸೂಚನೆ

ಬೆಂಗಳೂರು: ರಾಜ್ಯದಲ್ಲಿ ಬಿಸಿಲ ಧಗೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಮುಂದಿನ ಐದು ದಿನ ಕೆಲವು ಕಡೆ ಉಷ್ಣಾಂಶದಲ್ಲಿ ನಾಲ್ಕರಿಂದ ಐದು ಡಿಗ್ರಿ ಸೆಲ್ಸಿಯಸ್ ವರೆಗೆ ಹೆಚ್ಚಳವಾಗಬಹುದು ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ರಾಜ್ಯದ ಅನೇಕ ಕಡೆಗಳಲ್ಲಿ ಸಾಮಾನ್ಯಕ್ಕಿಂತ 2 ರಿಂದ 3 ಡಿಗ್ರಿ ಸೆಲ್ಸಿಯಸ್ ನಷ್ಟು ಅಧಿಕ ಉಷ್ಣಾಂಶ ದಾಖಲಾಗಿದೆ. ಬಹುತೇಕ ಜಿಲ್ಲೆಗಳಲ್ಲಿ ಪ್ರತಿ

ಇಲಾಖೆಯಿಂದಲೇ ನೆಲವಳಿ ಸುಂಕ ವಸೂಲಿಗೆ ಆಗ್ರಹ

ಮಧುಗಿರಿ: ಪಟ್ಟಣದಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ದಂಡಿನ ಮಾರಮ್ಮ ಜಾತ್ರೆ ಮಾರ್ಚ್ 11 ರಿಂದ 21 ರ ವರೆಗೂ ನಡೆಯಲಿದ್ದು ಅದರ ಸಲುವಾಗಿ ಸೋಮವಾರದಂದು ಜಾತ್ರೆ ಕಾಲದಲ್ಲಿ ಸೇರತಕ್ಕ ಅಂಗಡಿಗಳ ಮೇಲೆ ನೆಲವಳಿ ಸುಂಕ ವಸೂಲಿ ಮಾಡುವ ಹಕ್ಕಿನ ಹರಾಜು ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ ಇಲಾಖೆಯವತಿಯಿಂದಲೇ ನಡೆಸುವಂತೆ ಆಗ್ರಹಿಸಿ ಭಕ್ತಾದಿಗಳು ಮನವಿ ಸಲ್ಲಿಸಿದರು.

ಪುರಸಭೆ ಅಧ್ಯಕ್ಷ ಲಾಲಪೇಟೆ ಮಂಜುನಾಥ್ ಮಾತಾನಾಡಿ, ರಾಜ್ಯದಲ್ಲಿ 11 ದಿನಗಳ ಕಾಲ ನಡೆಯುವ ಈ ಜಾತ್ರಾ ಮಹೋತ್ಸವದಲ್ಲಿ ಹರಾಜುದಾರರು ಹೆಚ್ಚಿಗೆ ಕೂಗುವುದರಿಂದ ಭಕ್ತಾದಿಗಳಿಗೆ ಹೊರೆಯಾಗುತ್ತಿದೆ. ಮನೋರಂಜನೆ ನೀಡುವಂತಹ ಆಟಗಳಲ್ಲಿ ಮಕ್ಕಳನ್ನು ಸಂಪೂರ್ಣವಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗದೆ ಪೋಷಕರು ಸಾಕಷ್ಟು ತೊಂದರೆ ಆಗುತ್ತಿರುವುದರಿಂದ ಇದನ್ನು ಮನಗಂಡು ಹರಾಜು ಪ್ರಕ್ರಿಯೆ ನಡೆಸದೆ ಇಲಾಖಾವತಿಯಿಂದ ನಡೆಸುವಂತೆ ಜಾತ್ರೆಯ ಪರಿಸ್ಥಿತಿಯ ಬಗ್ಗೆ ವಿವರಿಸಿದರು.

ಕಳೆದ ಬಾರಿ 18 ಲಕ್ಷ 4 ಸಾವಿರಕ್ಕೆ ಹರಾಜು ಆಗಿದ್ದ ಕಾರಣ ಇದರ ಹೊರೆಯನ್ನು ಭಕ್ತರ ಮೇಲೆ ಬಿದ್ದ ಪರಿಣಾಮ ಜಾತ್ರೆಗೆ ಭಕ್ತಾದಿಗಳ ಆಗಮನಕ್ಕೆ ತೊಂದರೆ ಆಯಿತು. ಆದ್ದರಿಂದ ಭಕ್ತಾದಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಧರ ನಿಗದಿಯಾದರೆ ಭಕ್ತರ ಸಂಖ್ಯೆಯು ಹೆಚ್ಚಾಗುತ್ತದೆ ಜೊತೆಗೆ ಜಾತ್ರೆಯು ಕಳೆಗಟ್ಟುತ್ತದೆ ಎಂಬ ಅಭಿಪ್ರಾಯ ಅಲ್ಲಿದ್ದ ಎಲ್ಲಾ ಭಕ್ತಾದಿಗಳಿಂದ ಉಪವಿಭಾಧಿಕಾರಿಗಳಿಗೆ ಮನವರಿಕೆ ಮಾಡಿಕೊಟ್ಟರು.

ಈ ವೇಳೆ ಪುರಸಭೆ ಸದಸ್ಯ ಮಂಜುನಾಥ್ ಆಚಾರ್,ಮುಖಂಡರು ಗಳಾದ ಎಸ್ ಬಿ ಟಿ ರಾಮು,, ಕಿಶೋರ್,, ಬಾಲಾಜಿ ಬಾಬು, ಎಂ.ವಿ .ಮೂಡ್ಲಿಗಿರೀಶ್,ಯತೀಶ್ ಬಾಬು,ಜಿ. ನಾರಾಯಣರಾಜು, ಟಿ.ಪ್ರಸನ್ನಕುಮಾರ್, ಗ್ರಾಪಂ. ಮಾಜಿ ಅಧ್ಯಕ್ಷ ಗಿರಿಶ್, ಕನ್ನಡಪರ ಸಂಘಟನೆಗಳ ತಿಮ್ಮರಾಜು ಎಸ್‌ಟಿಡಿ ರಘು ಹಾಗೂ ಅಪಾರಭಕ್ತ ವೃಂದ ಹಾಜರಿದ್ದರು.

ಫೆ.27, 28ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ತುಮಕೂರು(ಕ.ವಾ)ಫೆ.24: ಬೆವಿಕಂ ನಗರ ಉಪವಿಭಾಗ–1 ವ್ಯಾಪ್ತಿಯಲ್ಲಿ ಅಟಲ್ ಭೂಜಲ್ ಯೋಜನೆಯಡಿ ಪ್ರತ್ಯೇಕ ಕೃಷಿ ಫೀಡರ್ ನಿರ್ಮಾಣ ಕಾರ್ಯ ಕೈಗೊಂಡಿರುವ ಹಿನ್ನೆಲೆಯಲ್ಲಿ ಫೆಬ್ರವರಿ 27ರಂದು ಗೋವಿಂದನಗರ, ಹೌಸಿಂಗ್ ಬೋರ್ಡ್, ಗುಬ್ಬಿ ಗೇಟ್, ಕುಂಟಮ್ಮನತೋಟ, ದಿಬ್ಬೂರು, ಬಿ.ಹೆಚ್.ಪಾಳ್ಯ, ಹೊನ್ನೇನಹಳ್ಳಿ ರಸ್ತೆ, ಹಾರೋನಹಳ್ಳಿ ಹಾಗೂ ಫೆ. 28ರಂದು ಹನುಮಂತಪುರ, ಕುವೆಂಪುನಗರ, ಆದರ್ಶನಗರ, ಅಣ್ಣೇತೋಟ, ಜಗನ್ನಾಥಪುರ, ಶಾರದಾದೇವಿ ನಗರ, ಗಣೇಶ ನಗರ, ನಿರ್ವಾಣಿ ಲೇಔಟ್‌ಗಳಲ್ಲಿ ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ನಾಗರಾಜು ಹೆಚ್.ಪಿ. ಮನವಿ ಮಾಡಿದ್ದಾರೆ.

ಮಧುಗಿರಿ ತಾಲೂಕಿನ ಪುರವರ ಹೋಬಳಿಯ ಗೊಂದಿಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ 2024–25 ಸಾಲಿನ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕ ನಂಜಪ್ಪ ಸಹ ಶಿಕ್ಷಕರಾದ ಶಿವಮ್ಮ, ಹರೀಶ್, ಅಮ್ಮಜಮ್ಮ ಅರುಣ್ ಮಲ್ಲಿಕಾರ್ಜುನಯ್ಯ ಸೇರಿದಂತೆ ಎಸ್ಡಿಎಂಸಿ ಪದಾಧಿಕಾರಿಗಳು ಹಾಜರಿದ್ದರು.

ಪಿಎಸ್‌ಸಿ ಕಚೇರಿಗೆ ಮುತ್ತಿಗೆಗೆ ತೀರ್ಮಾನ: ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡ

ಬೆಂಗಳೂರು : ಕೆಪಿಎಸ್ಸಿ ವತಿಯಿಂದ ಕನ್ನಡಿಗರಿಗೆ ಆಗುತ್ತಿರುವ ಅನ್ಯಾಯವನ್ನು ಖಂಡಿಸಿ ಕರವೇ ಕಾರ್ಯಕರ್ತರು ಮತ್ತು ಸಾವಿರಾರು ವಿದ್ಯಾರ್ಥಿಗಳು ಕೆಪಿಎಸ್ಸಿ ಕಚೇರಿಗೆ ಶೀಘ್ರದಲ್ಲೇ ಮುತ್ತಿಗೆ ಹಾಕಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಎಚ್ಚರಿಕೆ ನೀಡಿದ್ದಾರೆ.

ರವಿವಾರ ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು, 'ಫೆ.18ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಹೋರಾಟ ನಡೆಸಿದ್ದೆವು. ಚಳವಳಿಯ ಸಂದರ್ಭದಲ್ಲಿ ಸಿಎಂ ಸಿದ್ದರಾಮಯ್ಯನವರನ್ನು ಕರವೇ ನಿಯೋಗ ಭೇಟಿ ನೀಡಿ ಕೆಪಿಎಸ್ಸಿಯಿಂದ ಆಗಿರುವ ಅನ್ಯಾಯವನ್ನು ಬಿಡಿಸಿ ಹೇಳಿತ್ತು. ಈ ಸಂದರ್ಭದಲ್ಲಿ ನಮ್ಮ ಚಳವಳಿಗೆ ಸ್ಪಂದಿಸಿದ ಮುಖ್ಯಮಂತ್ರಿ ಎರಡು ದಿನಗಳಲ್ಲಿ ಕೆಪಿಎಸ್‌ಸಿ ಅಧ್ಯಕ್ಷರ ಮತ್ತು ಅಧಿಕಾರಿಗಳನ್ನು ಕರೆಯಿಸಿ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಹೇಳಿದ್ದರು. ಆದರೆ ಇದುವರೆಗೂ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ ಎಂದು ತಿಳಿಸಿದ್ದಾರೆ.

ಸರಕಾರ ಮತ್ತು ಕೆಪಿಎಸ್‌ಸಿ ನಮ್ಮ ಮುಂದಿನ ಹೋರಾಟಗಳ ಆಗುಹೋಗುಗಳಿಗೆ ಜವಾಬ್ದಾರಿ ಹೊರಬೇಕು. ನಾವು ವಿದ್ಯಾರ್ಥಿಗಳಿಗೆ ನ್ಯಾಯ ಸಿಗುವವರೆಗೂ ಕೈಕಟ್ಟಿ ಕೂರುವ ಪ್ರಶ್ನೆಯೇ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವೇದಿಕೆಯ ರಾಜ್ಯ ಮುಖಂಡರು, ಬೆಂಗಳೂರು ನಗರ ಪದಾಧಿಕಾರಿಗಳ ತುರ್ತು ಸಭೆಯಲ್ಲಿ ಕೆಪಿಎಸ್‌ಸಿ ನಡೆಸಿದ ಕೆಎಎಸ್ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಆಗಿರುವ ಅನ್ಯಾಯದ ಹಿನ್ನೆಲೆಯಲ್ಲಿ ಕರವೇ ಸಂಘಟಿಸಿರುವ ಚಳವಳಿಯನ್ನು ತೀವ್ರಗೊಳಿಸುವ ಕುರಿತು ಚರ್ಚೆ ನಡೆಸಲಾಗಿದೆ. ಪ್ರತಿಭಟನೆ ಮಾಡಿ ನಾಲ್ಕು ದಿನಗಳು ಕಳೆದರೂ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗೆ ನ್ಯಾಯ ಕೊಡುವ ಕುರಿತು ಸ್ವತಃ ಮುಖ್ಯಮಂತ್ರಿಗಳಾಗಲೀ, ಕೆಪಿಎಸ್‌ಸಿಯಾಗಲೇ ಒಂದೇ ಒಂದು ಮಾತು ಹೇಳಿಲ್ಲ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ಆಗಿರುವ ಅನ್ಯಾಯಕ್ಕೆ ಯಾರೂ ಸ್ಪಂದಿಸುವ ಹಾಗೆ ಕಾಣುತ್ತಿಲ್ಲ ಎಂದು ಹೇಳಿದ್ದಾರೆ.

ಶಾಂತಿಯುತ ಹೋರಾಟಕ್ಕೆ ಸರಕಾರ, ಕೆಪಿಎಸ್‌ಸಿ ಸ್ಪಂದಿಸುತ್ತಿಲ್ಲ. ಹೀಗಾಗಿ ನಾವು ಅನಿವಾರ್ಯವಾಗಿ ತೀವ್ರ ಸ್ವರೂಪದ ಹೋರಾಟಕ್ಕೆ ಕೈ ಹಾಕಬೇಕಾಗಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ತುಮಕೂರು ನಗರದಲ್ಲಿ ಗೋ ರಕ್ಷಣೆ ಸಾರುವ ನಂದಿ ರಥಯಾತ್ರೆಗೆ ಅದ್ದೂರಿ ಸ್ವಾಗತ

ಗೋವಿನ ಮಹತ್ವ ತಿಳಿದು ಸಂರಕ್ಷಣೆ ಮಾಡಿ: ಡಾ. ಶ್ರೀ ಶಿವಾನಂದ ಶಿವಚಾರ್ಯರು

ತುಮಕೂರು: ನಮ್ಮ ಋಷಿಮುನಿಗಳು ಹೇಳಿರುವಂತೆ ಗೋವಿನಲ್ಲಿ ಎಲ್ಲಾ ದೇವತೆಗಳಿದ್ದಾರೆ. ಗೋ ಪೂಜೆಯಿಂದ ಎಲ್ಲಾ ದೇವತೆಗಳ ದರ್ಶನವಾಗುತ್ತದೆ. ಕುಂಭ ಮೇಳದಲ್ಲಿ ಪವಿತ್ರ ಸ್ನಾನ ಮಾಡಿದರೆ ಪಾಪ ನಿವಾರಣೆಯಾಗಿ ಸಿಗಬಹುದಾದ ಪುಣ್ಯ ಗೋ ಪೂಜೆಯಿಂದ ಸಿಗುತ್ತದೆ ಎಂದು ಹಿರೇಮಠದ ಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಗೋ ಸೇವಾ ಗತಿವಿಧಿ, ರಾಧಾ ಸುರಭಿ ಗೋ ಮಂದಿರ, ರಾಷ್ಟ್ರೀಯ ಗೋ ಸೇವಾ ಸಂಸ್ಥಾನ ಟ್ರಸ್ಟ್ ಆಶ್ರಯದಲ್ಲಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ನಂದಿ ರಥಯಾತ್ರೆ ಭಾನುವಾರ ನಗರಕ್ಕೆ ಆಗಮಿಸಿದಾಗ ನಂದಿ ರಥಯಾತ್ರಾ ಸಮಿತಿಯವರು, ನಗರದ ಗಣ್ಯರು ಸ್ವಾಗತಿಸಿ ಬರಮಾಡಿಕೊಂಡರು. ನಂತರ ನಗರದ ಪ್ರಮುಖ ರಸ್ತೆಗಳ ಮೂಲಕ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನ ತಲುಪಿತು. ಇದರ ಪ್ರಯುಕ್ತ ನಡೆದ ಸಾರ್ವಜನಿಕ ಸಮಾರಂಭ ಉದ್ಘಾಟಿಸಿದ ಹಿರೇಮಠ ಶ್ರೀಗಳು ಮಾತನಾಡಿ, ಗೋವಿನ ಪಾವಿತ್ರತೆ, ಮಹತ್ವದ ಬಗ್ಗೆ ನಮ್ಮ ವೇದ, ಪುರಾಣ, ಉಪನಿಷತ್‌ಗಳಲ್ಲಿ ಉಲ್ಲೇಖವಿದೆ. ಗೋವು ನಮಗೆ ದೇವರಾಗಿ, ತಾಯಿಯಾಗಿ ಪೂಜ್ಯವಾಗಿದೆ ಎಂದರು.

ಗೋ ದಾನ ಶ್ರೇಷ್ಠವಾದದ್ದು, ಗೋವುಗಳು ನಮ್ಮ ಬದುಕಿನ ಎಲ್ಲಾ ಆಯಾಮಗಳಲ್ಲೂ ಗೋವಿಗೆ ನಾವು ಪವಿತ್ರ ಸ್ಥಾನ ನೀಡಿದ್ದೇವೆ. ಬಂದಿವೆ. ಗೋ ಸಂತತಿ ರಕ್ಷಣೆ ಮಾಡುವ ಪರಂಪರೆ ಮುಂದುವರೆಸಬೇಕು ಎಂದು ಹೇಳಿದರು.

ಸಿದ್ಧಗಂಗಾ ಮಠದ ಕಿರಿಯ ಶ್ರೀಗಳಾದ ಶಿವಸಿದ್ಧೇಶ್ವರ ಸ್ವಾಮೀಜಿ ಸಮಾರಂಭದ ಸಾನಿಧ್ಯ ವಹಿಸಿದ್ದರು. ಕರ್ನಾಟಕ ದಕ್ಷಿಣ ಪ್ರಾಂತ ಸೇವಾ ಪ್ರಮುಖ್ ಗುರುರಾಜ ಕುಲಕರ್ಣಿ ಮುಖ್ಯ ಭಾಷಣ ಮಾಡಿದರು. ನಂದಿ ರಥಯಾತ್ರಾ ಸಮಿತಿ ಅಧ್ಯಕ್ಷ ಕೋರಿ ಮಂಜುನಾಥ್ ಅಧ್ಯಕ್ಷತೆ ವಹಿಸಿದ್ದರು.

ಇದಕ್ಕೂ ಮೊದಲು ವಿಷ್ಣು ಸಹಸ್ರನಾಮ ಪಾರಾಯಣ, ಬಳಿಕ ಗೋ ಪೂಜೆ ನಡೆಸಲಾಯಿತು. ಕಾರ್ಯಕ್ರಮದ ನಂತರ ಸಾಯಿ ರಾಮನ್ ನೃತ್ಯ ಕೇಂದ್ರದವರು 'ಪುಣ್ಯಕೋಟಿ' ಎಂಬ ನೃತ್ಯ ರೂಪಕ ನಡೆಸಿಕೊಟ್ಟರು.

ಇದಕ್ಕೂ ಮೊದಲು ಗುಬ್ಬಿಯಿಂದ ಆಗಮಿಸಿದ ನಂದಿ ರಥಯಾತ್ರೆಯನ್ನು ಭೀಮಸಂದ್ರದಲ್ಲಿ ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಸ್ವಾಗತಿಸಿ ನಂದಿಗೆ ಪೂಜೆ ಸಲ್ಲಿಸಿದರು. ಈ ವೇಳೆ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್, ಬಿ.ಸುರೇಶ್‌ಗೌಡ, ಜಿಲ್ಲಾ ಬಿಜೆಪಿ ಅಧ್ಯಕ್ಷ ರವಿಶಂಕರ್ ಹೆಬ್ಬಾಕ, ರಥ ಯಾತ್ರಾ ಸಮಿತಿ ಅಧ್ಯಕ್ಷ ಕೋರಿ ಮಂಜುನಾಥ್ ಹಾಗೂ ವಿವಿಧ ಗಣ್ಯರು ಹಾಜರಿದ್ದರು. ನಂತರ ಬೈಕ್ ರ್‍ಯಾಲಿ ಮೂಲಕ ರಥಯಾತ್ರೆಯನ್ನು ನಗರದ ಬಿಜಿಎಸ್ ವೃತ್ತದವರೆಗೆ ಕರೆತರಲಾಯಿತು. ಬಿಜಿಎಸ್ ವೃತ್ತದಲ್ಲಿ ಯಾತ್ರೆಗೆ ಶಾಸಕ ಜಿ.ಬಿ.ಜ್ಯೋತಿಗಣೇಶ್ ಚಾಲನೆ ನೀಡಿದರು. ಮಂಗಳವಾದ್ಯ, ಪೂರ್ಣ ಕುಂಭ, ಜಾನಪದ ಕಲಾತಂಡಗಳ ಪ್ರದರ್ಶನದೊಂದಿಗೆ ರಥಯಾತ್ರೆ ಪ್ರಮುಖ ರಸ್ತೆಯಲ್ಲಿ ಸಾಗಿಬಂದಿತು.

ಸ್ವಾಗತ ಸಮಿತಿ ಉಪಾಧ್ಯಕ್ಷರಾದ ಟಿ.ಕೆ.ನಂಜುಂಡಪ್ಪ, ಮಹೇಂದ್ರ ವೈಷ್ಣವ್, ಆರ್.ಎಲ್. ರಮೇಶ್ ಬಾಬು, ಮುರಳಿಧರ ಹಾಲಪ್ಪ, ಎಸ್.ಜಿ.ಚಂದ್ರ ಮೌಳಿ, ವೈ.ಹೆಚ್.ಹುಚ್ಚಯ್ಯ, ಎಸ್.ನಾಗಣ್ಣ, ಕಾರ್ಯದರ್ಶಿ ಗ.ಸೀ.ಅನಂತರಾಮು, ಖಜಾಂಚಿ ಡಾ.ಎಸ್.ಪರಮೇಶ್, ಸಹಕಾರ್ಯದರ್ಶಿಗಳಾದ ಬಿ.ಎಸ್.ಮಹೇಶ್, ಜಿ.ಕೆ.ಶ್ರೀನಿವಾಸ್, ಜಿ.ಎಸ್. ಬಸವರಾಜು ಮೊದಲಾದವರು ಭಾಗವಹಿಸಿದ್ದರು.

ಮಠ ಮಾನ್ಯಗಳು ಆಧ್ಯಾತ್ಮಿಕ ಹಾಗೂ ಧಾರ್ಮಿಕ ಶಕ್ತಿ ತುಂಬುತ್ತಿವೆ

ಬಿದನಗೆರೆ ಶ್ರೀ ಬಸವೇಶ್ವರ ಮಠದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್

ಕುಣಿಗಲ್: ಭಾರತಿಯ ಸನಾತನ ಸಂಸ್ಕೃತಿ, ಪರಂಪರೆಯು ಅನನ್ಯವಾಗಿದ್ದು, ಮಠ ಮಾನ್ಯಗಳು ಆಧ್ಯಾತ್ಮಿಕ ಹಾಗೂ ಧಾರ್ಮಿಕ ಶಕ್ತಿಯನ್ನು ತುಂಬುವ ಕೆಲಸ ಮಾಡುವ ಮೂಲಕ ಭಕ್ತರಿಗೆ ಮಾನಸಿಕವಾಗಿ ಶಕ್ತಿ ನೀಡುತ್ತಿದೆ ಎಂದು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದರು.

ತಾಲೂಕಿನ ಸುಪ್ರಸಿದ್ಧ ಬಿದನಗೆರೆ ಶ್ರೀ ಬಸವೇಶ್ವರ ಮಠದಲ್ಲಿ ನೂತನ ನವಗ್ರಹ ದಂಪತಿಗಳ ದೇವಾಲಯ ಹಾಗೂ ಗೋಪುರ ಕಳಸ ಪ್ರತಿಷ್ಠಾನೆ ಲೋಕಾರ್ಪಣೆ ಗೊಳಿಸಿದ ಅವರು ಅಲ್ಲಿದ್ದ ಭಕ್ತರಿಗೆ ಕನ್ನಡದಲ್ಲಿ ಮೊದಲು ಶುಭಾಶಯ ಕೋರಿ ಮಾತನಾಡಿ ಬಸವೇಶ್ವರ ಮಠವು ಆಧ್ಯಾತ್ಮಿಕ ಹಾಗೂ ಮಾನಸಿಕ ಪುಣ್ಯ ಕ್ಷೇತ್ರವಾಗಿ ಧಾರ್ಮಿಕ



ವಾಗಿ ಅಭಿವೃದ್ಧಿ ಹೊಂದುತ್ತಾ ಸನಾತನ ಹಿಂದೂ ಧರ್ಮದ ಅಭಿವೃದ್ಧಿಯೇ ಮಠದ ಮೂಲ ಉದ್ದೇಶವಾಗಿದೆ ಸಮಾಜ ಸುಧಾರಣೆ ಶಿಕ್ಷಣ ಸಮಾನತೆ ಸೋದರತ್ವದ ಭಾವೈಕ್ಯತೆಯಿಂದ ಹೊಂದಿರುವ ಈ ಮಠದಲ್ಲಿ ಬಹು ಎತ್ತರದ ಪ್ರಸಿದ್ಧ 161 ಅಡಿ ಎತ್ತರದ ಪಂಚ ಮುಖಿ ಆಂಜನೇಯ ನೆಲೆಸಿದ್ದು ಜೊತೆಗೆ ಶ್ರೀ ಶನೇಶ್ವರಸ್ವಾಮಿ ಇದೆ ಇದೀಗ ಈ ಪುಣ್ಯಕ್ಷೇತ್ರದಲ್ಲಿ ನವಗ್ರಹಗಳು ನವಗ್ರಹ ದಂಪತಿ ಸಮೇತ ಇರುವ ದೇವಾಲಯ ಸ್ಥಾಪನೆ ಮಾಡಿರುವುದು ಶ್ಲಾಘನಿಯ ವಾಗಿದೆ ಎಂದರು.

ಬಿದನಗೆರೆ ಬಸವೇಶ್ವರ ಮಠದ ಪೀಠಾಧಿಕಾರಿಗಳಾದ ಶ್ರೀ ಧನಂಜಯ ಗುರೂಜಿ ಪ್ರಾಸ್ತಾವಿಕವಾಗಿ ಮಾತನಾಡುತ್ತ ಸಣ್ಣ ಗುಡಿಸಿಲಿನಲ್ಲಿ ಆರಂಭಗೊಂಡ ಈ ಕ್ಷೇತ್ರವು ಇಂದು ಭಕ್ತರಿಂದ ಬೆಳೆಯುತ್ತಿದ್ದು ಕಷ್ಟದ ದಿನಗಳಲ್ಲಿ ಜನರು ತಿರಸ್ಕರಿಸಿದ ಆಗ ಆ ಭಗವಂತ ಕೈ ಬಿಡದೆ ಈ ಮಠ ವನ್ನು ಮುನ್ನಡೆಸಲು ಪ್ರೇರೇಪಿಸಿರು ತ್ತಾನೆ ಹಿಂದೂ ಧರ್ಮದ ಸನಾತನ ಧರ್ಮ ಉಳಿಯಬೇಕು ಧಾರ್ಮಿಕ ದೇವಾಲಯ ಗಳು ಬೆಳೆಯುವಂತಾ ಗಬೇಕೆಂದರು.

ಹಾರ್ಟ್ ಆಫ್ ಲಿವಿಂಗ್ ಧರ್ಮ ಗುರುಗಳಾದ ಶ್ರೀ ರವಿಶಂಕರ್ ಗುರೂಜಿ ಮಾತನಾಡುತ್ತಾ ಹಿಂದೂ ಸನಾತನ ಧರ್ಮವು ಉಳಿಯಬೇಕಾದರೆ ಧಾರ್ಮಿಕ ಪರಂಪರೆಗಳು ಮಠಮಾನ್ಯಗಳು ಸಮಾಜದಲ್ಲಿ ಅವಶ್ಯಕವಾಗಿರುತ್ತವೆ ರಾಜ್ಯವು ಹನುಮಂತನ ತವರೂರಾಗಿದ್ದು ಇತಿಹಾಸ ಪರಂಪರೆಗಳನ್ನು ದೇಶ–ವಿದೇಶಗಳಲ್ಲಿ ಹರಡುವಂತ ಕೆಲಸ ಕೈಗೊಳ್ಳಬೇಕಾಗಿದೆ ಎಂದರು.

ಸುತ್ತೂರು ಪೀಠಾಧ್ಯಕ್ಷರಾದ ಶ್ರೀ ಸುತ್ತೂರು ಶಿವರಾತ್ರಿ ದೇಶಿ ಕೇಂದ್ರ ಮಹಾಸ್ವಾಮಿಗಳು ಮಾತನಾಡುತ್ತಾ ಧಾರ್ಮಿಕ ಕೇಂದ್ರಗಳು ಜನರ ಸಂಕಷ್ಟ ಗಳನ್ನು ಬಗೆಹರಿಸಿ ಅವರಿಗೆ ಮಾರ್ಗ ದರ್ಶನ ಮಾಡುವುದರೊಂದಿಗೆ ಮನುಷ್ಯರಲ್ಲಿ ಆಧ್ಯಾತ್ಮಿಕ ಭಾವನೆಗಳನ್ನು ಮೂಡಿಸುವ ಮೂಲಕ ಸಮಾಜದಲ್ಲಿ ಶಾಂತಿ ನೆಮ್ಮದಿ ನೆಲೆಸುವಂತೆ ಪ್ರೇರೇಪಿಸಿ ದರೊಂದಿಗೆ ಅವರಲ್ಲಿ ಶಾಂತಿ ನೆಮ್ಮದಿ ದೊರಕುವಂತೆ ಶ್ರೀ ಕ್ಷೇತ್ರವು ಮಾಡುತಿದೆ ಎಂದರು.

ಕಾರ್ಯಕ್ರಮದಲ್ಲಿ ಗೌರಿ ಗದ್ದೆಯ ಶ್ರೀ ವಿನಯ ಗುರೂಜಿ, ಮಠದ ಶ್ರೀ ಪ್ರಕಾಶ್ ನಾಥ ಸ್ವಾಮೀಜಿ, ಅಭಯ ಕುಮಾರ್ ಜೈನ್, ಸೇರಿದಂತೆ ಮಠದ ಟ್ರಸ್ಟಿಗಳು ಹಾಗು ಗಣ್ಯರು ಭಾಗವಹಿಸಿದ್ದರು.

ಫೋದಾರ್ ಇಂಟರ್‌ನ್ಯಾಷನಲ್‌ನಲ್ಲಿ ವಿಜ್ಞಾನ, ಕಲಾ ತಂತ್ರಜ್ಞಾನ ವಸ್ತು ಪ್ರದರ್ಶನ

ತುಮಕೂರು: ಗೂಳೂರು ಸಮೀಪವಿರುವ ಫೋದರ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ವಿಜ್ಞಾನ, ಕಲಾ ತಂತ್ರಜ್ಞಾನ ವಸ್ತು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿದ ಶಾಲೆಯ ಪ್ರಾಂಶುಪಾಲ ರಾದ ಡಾ. ಲವ.ಎವ್.ಬಿ. ಅವರು ಮಾತನಾಡುತ್ತಾ ವಿಜ್ಞಾನ ಮತ್ತು ತಂತ್ರಜ್ಞಾನದ ವಸ್ತು ಪ್ರದರ್ಶನವು ವಿದ್ಯಾರ್ಥಿಗಳಲ್ಲಿ ಸುಪ್ತ ಪ್ರಜ್ಞೆಯನ್ನು ಹಾಗೂ ಪ್ರತಿಭೆಯನ್ನು ಹೊರ ಹಾಕುವಂತಹ ಪ್ರಯತ್ನವಾಗಿದೆ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಕಲಿತಿರುವಂ ತಹ ಪ್ರತಿಭೆಗಳನ್ನು ಪ್ರದರ್ಶನಕ್ಕೆ ಇಡುವ ಮೂಲಕ ಇನ್ನಷ್ಟು ಪ್ರಭುದ್ಧರಾಗುವ ಅವಕಾಶವಿದೆ. ಅವರ ಈ ಕಲಿಕೆ ಮುಂದೆ ಅವರನ್ನು ಮತ್ತಷ್ಟು ವಿದ್ಯಾವಂತರಾಗಿ ಜ್ಞಾನವಂತರಾಗಿ ಮಾಡಲು ಸಹಕಾರಿ ಯಾಗುತ್ತದೆ ಯಾವುದೇ ರೀತಿಯ ಭಯವಿಲ್ಲದೆ ಪ್ರಯೋಗ ಮತ್ತು ಪ್ರತಿಭೆಯ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆಗಳನ್ನು ನೀಡಲಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಮಹೇಶ್ ಪಿಯು ಕಾಲೇಜಿನ ಜೀವಶಾಸ್ತ್ರ ಉಪನ್ಯಾಸ ಕರಾದ ನಂದನಾ. ಎಸ್. ಮಾತನಾಡಿದರು. ಫೋದಾರ್ ಪ್ರೆಪ್‌ನ ಮುಖ್ಯ ಶಿಕ್ಷಕಿ ರೇಷ್ಮಾ ಶೆಟ್ಟಿ, ಭೌತಶಾಸ್ತ್ರ ಉಪನ್ಯಾಸಕ ರಾದ ಲಕ್ಷ್ಮೀಕಾಂತ್ ಹೆಚ್.ಎನ್., ಶಾಲಾ ಸಿಬ್ಬಂದಿ ಹಾಗೂ ಪ